ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 04/06/2019

# ರಮೇಶ್ ಕುಮಾರ್ ಭೇಟಿ ಮಾಡಿದ ಸಿಎಂ

**ಬೆಂಗಳೂರು:** ಮೈತ್ರಿ ಸರ್ಕಾರದ ಆಡಳಿತದ ಬಗ್ಗೆ ಅಸಮಾಧಾನ ಹೊಂದಿದ್ದಾರೆ ಎಂಬ ಮಾತುಗಳು ಕೇಳಿ ಬಂದ ಬೆನ್ನಲ್ಲೇ ವಿಧಾನಸಭಾಧ್ಯಕ್ಷ ರಮೇಶ್ ಕುಮಾರ್ ಅವರನ್ನು ಸೋಮವಾರ ಮುಖ್ಯಮಂತ್ರಿ ಕುಮಾರಸ್ವಾಮಿ ಭೇಟಿ ಮಾಡಿ ಮಾತುಕತೆ ನಡೆಸಿದರು.

ವಿಧಾನಸೌಧದ ಮೊದಲ ಮಹಡಿಯಲ್ಲಿ ಸಿದ್ದರಾಮಯ್ಯ ಅವರಿಗೆ ನೀಡಲಾದ ಕೊಠಡಿಯಲ್ಲಿ ಸ್ಪೀಕರ್ ರಮೇಶ್ ಕುಮಾರ್ ಅವರೊಂದಿಗೆ ಮುಖ್ಯಮಂತ್ರಿ ಕುಮಾರಸ್ವಾಮಿ ಅರ್ಧಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿದರು.

ಮುಖ್ಯಮಂತ್ರಿ ಭೇಟಿಯ ನಂತರ ಸುದ್ದಿಗಾರರ ಜತೆ ಮಾತನಾಡಿದ ರಮೇಶ್ ಕುಮಾರ್, ನನ್ನ ಕ್ಷೇತ್ರದ ಕೆಲಸಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿಗೆ ತಿಳಿಸಿದ್ದೆ, ಅವರೇ ಬಂದು ನನ್ನ ಕ್ಷೇತ್ರದಲ್ಲಿ ಆಗಬೇಕಿರುವ ಕೆಲಸಗಳನ್ನು ಮಾಡಿ ಕೊಡುವುದಾಗಿ ತಿಳಿಸಿದ್ದಾರೆ. ಅದರ ಹೊರತಾಗಿ ಬೇರೆ ಯಾವುದೇ ರೀತಿಯ ಚರ್ಚೆ ನಡೆಸಿಲ್ಲ ಎಂದು ಹೇಳಿದರು. ಮುಖ್ಯಮಂತ್ರಿ ಕುಮಾರಸ್ವಾಮಿಗೆ ಪತ್ರ ಬರೆದಿರುವ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಯಾರಿಗೂ ಪತ್ರ ಬರೆದಿಲ್ಲ, ಸುಮ್ಮನೇ ಸುಳ್ಳು ಸುದ್ದಿ ಹರಡಲಾಗಿದೆ ಎಂದು ಹೇಳಿದರು.